1 ನೇ **ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸಾಗರ**

**ಸಿಸಿ ನಂಬರು** 270-2025

**ಸಿ.ಡಬ್ಲ್ಯು -**13, **ಪಿ.ಡಬ್ಲ್ಯು -**7

**ಸಾಕ್ಷಿದಾರರ ಹೆಸರು** : ಪಾರ್ವತಿ
ಗಂಡನ **ಹೆಸರು** : ಮಂಜುನಾಥ್
**ವಯಸ್ಸು** : 40 ವರ್ಷ
**ಉದ್ಯೋಗ** : ಗೃಹಿಣಿ
**ವಾಸ** : ಎಸ್.ಎನ್. ನಗರ, ಸಾಗರ.

**ಪ್ರಮಾಣೀಕರಿಸಿದ** ದಿನಾಂಕ **:22.06.2026.**

**ಮುಖ್ಯ ವಿಚಾರಣೆ : ಸಸಅ ರಿಂದ**

1. ಆರೋಪಿಯ ಪರಿಚಯವಿಲ್ಲ. ನನ್ನ ಹೆಸರಿನಲ್ಲಿ ಸ್ಕೂಟಿ ದ್ವಿ ಚಕ್ರ ವಾಹನ ಇರುತ್ತದೆ, ಅದರೆ ಸಂಖ್ಯೆ ಗೊತ್ತಿಲ್ಲ. ಉಳಿದಂತೆ ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ಪೊಲೀಸರು ನನ್ನ ಯಾವುದೇ ವಿಚಾರಣೆಯನ್ನು ಮಾಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ ಕಲಂ 161 ರ ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲುಃ- ಸ.ಸ.ಅ. ರವರಿಂದಃ-

1. ನನ್ನ ಮಾಲೀಕತ್ವಕ್ಕೆ ಎಂ ಇ 4 ಜೆ ಎಫ್ 984 ಬಿ ಪಿ ಡಬ್ಯೂ 182216 ಚಾಸೀಸ್ ನಂಬರ್ ನ ವಾಹನ ಇರುತ್ತದೆ ಎಂದರೆ ಸರಿ. ನನ್ನ ವಾಹನವನ್ನು ಆರೋಪಿ ಕಳ್ಳತನಕ್ಕೆ ಬಳಸುತ್ತಿದ್ದರು ಎಂದರೆ ಸರಿಯಲ್ಲ. ಎಲ್ಲಾ ವಿಷಯ ಗೊತ್ತಿದ್ದರೂ ಆರೋಪಿಗೆ ಸಹಾಯವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.

ಮರು ವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**

**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.